# ಆಧ್ಯಾತ್ಮಿಕ ಜೀವನದ ಸಾರ



❁ ಎಲೆ ಅಡಿಕೆ ಹಾಕಿಕೊಳ್ಳುವುದು, ಮೀನು ತಿನ್ನುವುದು, ತಂಬಾಕು ಸೇವಿಸುವುದು, ಮೈಗೆ ಎಣ್ಣೆ ಸವರಿಕೊಳ್ಳುವುದು — ಇವೆಲ್ಲಾ ಅಂಥಾ ಕೆಡುಕಾದುದೇನಲ್ಲ. ಕೇವಲ ಇವನ್ನೇ ತ್ಯಜಿಸಿದರೆ ದೊರೆಯುವ ಪುರುಷಾರ್ಥವೇನು? ಅತ್ಯಂತ ಆವಶ್ಯಕವಾದುದು ಕಾಮಕಾಂಚನ ತ್ಯಾಗ. ಆ ತ್ಯಾಗವೇ ನಿಜವಾದ ತ್ಯಾಗ. ಗೃಹಸ್ಥರು ಆಗಾಗ ನಿರ್ಜನ ಪ್ರದೇಶಕ್ಕೆ ಹೋಗಿ, ಸಾಧನೆ-ಭಜನೆ ಮಾಡಿ ಭಕ್ತಿಯನ್ನು ಗಳಿಸಿಕೊಳ್ಳಬೇಕು. ಅವರು ಮಾನಸಿಕವಾಗಿ ತ್ಯಾಗ ಮಾಡಬೇಕು. ಆದರೆ ಸಂನ್ಯಾಸಿ ಮಾನಸಿಕವಾಗಿ, ಬಾಹ್ಯಿಕವಾಗಿ — ಈ ಎರಡು ವಿಧದಿಂದಲೂ ತ್ಯಾಗಮಾಡಬೇಕು.

❁ ಮುಖ್ಯವಾಗಿ ಮಾಡಬೇಕಾದ್ದು ಭಗವಂತನನ್ನು ಪ್ರೀತಿಸುವುದು, ಆತನ ಮಾಧುರ್ಯವನ್ನು ಸವಿಯುವುದು. ಆತ ರಸ, ಭಕ್ತ ಆಸ್ವಾದಕ. ಭಕ್ತ ಭಗವದಾನಂದವನ್ನು ಸವಿಯುತ್ತಾನೆ. ಆತ ತಾವರೆ ಹೂವು, ಭಕ್ತ ದುಂಬಿ. ಭಕ್ತ ತಾವರೆ ಹೂವಿನ ಮಧುವನ್ನು ಹೀರುತ್ತಾನೆ.

❁ ಭಗವಂತನನ್ನು ಯಾರು ತಾನೆ ಅರಿತುಕೊಳ್ಳಬಲ್ಲರು? ನಾನು ಆ ಪ್ರಯತ್ನವನ್ನೇ ಮಾಡುವುದಿಲ್ಲ. ನಾನು ಆತನನ್ನು ಕೇವಲ 'ತಾಯಿ' ಅಂತ ಮಾತ್ರ ಕೂಗುತ್ತೇನೆ. ತಾಯಿ ತನ್ನ ಇಚ್ಛೆಯಿದ್ದಂತೆ ಮಾಡಲಿ. ಆಕೆಯ ಇಚ್ಛೆಯಿದ್ದರೆ ತಾನೇ ತೋರಿಸಿಕೊಡುತ್ತಾಳೆ — ತಾನು ಏನು ಎಂಬುದನ್ನು. ಇಲ್ಲದಿದ್ದರೆ ಇಲ್ಲ. ನನ್ನದು ಬೆಕ್ಕಿನ ಮರಿಯ ಸ್ವಭಾವ. ಕೇವಲ ಅದು, 'ಮಿಯಾವ್!' 'ಮಿಯಾವ್!' ಅಂತ ಕೂಗುತ್ತದೆ. ಉಳಿದ ತನ್ನ ಯೋಗಕ್ಷೇಮವನ್ನೆಲ್ಲಾ ತಾಯಿಗೆ ಬಿಟ್ಟುಬಿಟ್ಟಿರುತ್ತದೆ. ತಾಯಿಬೆಕ್ಕು ಕೆಲವು ವೇಳೆ ಮರಿಯನ್ನು ಅಡಿಗೆಮನೆಯಲ್ಲಿ, ಇನ್ನು ಕೆಲವು ವೇಳೆ ಯಜಮಾನನ ಹಾಸಿಗೆ ಮೇಲೆ ಇಡುತ್ತದೆ. ಚಿಕ್ಕ ಮಗುವಿಗೆ ತಾಯಿ ಮಾತ್ರ ಬೇಕು.

❁ ಅತಿಯಾಗಿ ಬಾಹ್ಯಾಚಾರದಲ್ಲಿ ತೊಡಗಬೇಡ. ಒಮ್ಮೆ ಒಬ್ಬ ಸಾಧುವಿಗೆ ತಡೆಯಲಾರದ ಬಾಯಾರಿಕೆಯಾಯಿತು. ಚಕ್ಕಳದಲ್ಲಿ ನೀರು ಹೊತ್ತುಕೊಂಡು ಹೋಗುತ್ತಿದ್ದ ಒಬ್ಬ ವ್ಯಕ್ತಿ ನೀರು ಕೊಡಲು ಮುಂದೆ ಬಂದ. ಸಾಧು ಆತನನ್ನು ಕೇಳಿದ: 'ಏನು, ನಿನ್ನ ಚೀಲವನ್ನು ಚೆನ್ನಾಗಿ ತೊಳೆದಿದ್ದೀಯಾ?' ಆತ ಹೇಳಿದ: 'ಸ್ವಾಮಿ, ನನ್ನ ಚೀಲ ಸಂಪೂರ್ಣವಾಗಿ ಪರಿಶುದ್ಧವಾಗಿದೆ. ಆದರೆ ನಿಮ್ಮ ಚೀಲದೊಳಗೆ ಮಲಮೂತ್ರ, ಇನ್ನೂ ಏನೇನೋ ಕಶ್ಮಲ ತುಂಬಿವೆ. ಆದ್ದರಿಂದ ನಾನು ಹೇಳುತ್ತೇನೆ. ನೀವು ನಿಸ್ಸಂಕೋಚವಾಗಿ ನನ್ನ ಚೀಲದಿಂದ ನೀರು ಕುಡಿಯಬಹುದು. ಇದರಿಂದ ನಿಮಗೆ ಯಾವ ಕೇಡೂ ಸಂಭವಿಸದು.' 'ನಿಮ್ಮ ಚೀಲ' ಎಂಬುದಾಗಿ ಆ ನೀರು ಹೊರುವ ವ್ಯಕ್ತಿ ಹೇಳಿದುದರ ಅರ್ಥ ದೇಹ, ಹೊಟ್ಟೆ ಇತ್ಯಾದಿ.

❁ ನಿಜವಾದ ಶ್ರದ್ಧೆಯಿಂದಲೇ ಆತನ ಸಾಕ್ಷಾತ್ಕಾರವನ್ನು ಪಡೆದುಕೊಂಡುಬಿಡಬಹುದು. ಭಗವಂತನ ಸಂಬಂಧವಾಗಿ ಹೇಳಿರುವುದರಲ್ಲೆಲ್ಲಾ ಪೂರ್ಣ ಶ್ರದ್ಧೆಯಿಡುವುದಾದರೆ, ಸಾಕ್ಷಾತ್ಕಾರ ಇನ್ನೂ ಬೇಗ ದೊರೆತುಬಿಡುತ್ತದೆ. ಹಸು ಆರಿಸಿಕೊಂಡು ಮೇವು ಮೇಯ್ದರೆ ಕಡಿಮೆ ಹಾಲು ಕೊಡುತ್ತದೆ. ಆದರೆ ಅದು ಎಲ್ಲಾ ವಿಧದ ಗಿಡ, ಗಡ್ಡೆಗಳನ್ನು ತಿಂದಿತು ಎಂದರೆ, ಧಾರಾಕಾರವಾಗಿ ಹಾಲು ಕರೆಯುತ್ತದೆ.

❁ ಯಾರ ಮನಸ್ಸು, ಪ್ರಾಣ, ಅಂತರಾತ್ಮ ಭಗವದ್ಗತವಾಗಿದೆಯೊ ಆತನೇ ಸಾಧು. ಯಾರು ಕಾಮಕಾಂಚನ ತ್ಯಾಗಿಯೊ ಆತನೇ ಸಾಧು. ಯಾರು ಸಾಧುವೋ ಆತ ಹೆಂಗಸರನ್ನು ಎಂದಿಗೂ ಐಹಿಕ ದೃಷ್ಟಿಯಿಂದ ನೋಡುವುದಿಲ್ಲ. ಸರ್ವದಾ ಅವರಿಂದ ದೂರದಲ್ಲೆ ಇರುತ್ತಾನೆ. ಒಂದು ಪಕ್ಷ ಅವರನ್ನು ಸಮೀಪಿಸಬೇಕಾಗಿ ಬಂದರೆ ಅವರನ್ನು ಮಾತೃದೃಷ್ಟಿಯಿಂದ ನೋಡುತ್ತ ಅವರನ್ನು ಪೂಜೆಮಾಡುತ್ತಾನೆ. ಸಾಧು ಯಾವಾಗಲೂ ಭಗವಚ್ಚಿಂತನೆಯನ್ನೇ ಮಾಡುತ್ತಾನೆ. ಭಗವತ್ಸಂಬಂಧವಾಗಿ ಹೊರತು ಬೇರೆ ಯಾವ ಮಾತನ್ನೂ ಆಡುವುದಿಲ್ಲ. ಸರ್ವಭೂತಗಳಲ್ಲಿಯೂ ಭಗವಂತನೇ ಇದ್ದಾನೆ ಎಂಬುದನ್ನು ಅರಿತು ಅವರ ಸೇವೆಯನ್ನು ಮಾಡುತ್ತಾನೆ. ಸಾಮಾನ್ಯವಾಗಿ ಇವು ಸಾಧುವಿನ ಲಕ್ಷಣಗಳು.

❁ ಫುಟ್‌ಪಾತಿನಲ್ಲಿರುವ ಮರಗಳನ್ನು ನೀನು ನೋಡಿಲ್ಲವೇನು? ಅವು ಸಸಿಯಾಗಿರುವವರೆಗೆ ಬೇಲಿ ಹಾಕಬೇಕು. ಇಲ್ಲದಿದ್ದರೆ ದನ, ಕರು, ಆಡು, ಅವನ್ನು ತಿಂದುಬಿಡುತ್ತವೆ. ಆದರೆ ಗಿಡದ ಕಾಂಡ ದಪ್ಪವಾಯಿತು ಎಂದರೆ, ಬಳಿಕ ಬೇಲಿ ಬೇಕಾಗಿರುವುದಿಲ್ಲ. ಅನಂತರ ಅದಕ್ಕೆ ಆನೆಯನ್ನು ತಂದು ಕಟ್ಟಿದರೂ ಅದಕ್ಕೇನೂ ಆಗುವುದಿಲ್ಲ. ಅದೇ ರೀತಿಯಾಗಿ ನೀನು ಮನಸ್ಸನ್ನು ಬಲವಾದುದನ್ನಾಗಿ ಮಾಡಿಕೊಂಡು ಬಿಟ್ಟಿದ್ದೇ ಆದರೆ ಇನ್ನು ಚಿಂತೆಯೇನು? ಭಯವೇನು? ವಿವೇಕವನ್ನು ಗಳಿಸಿಕೊಳ್ಳಲು ಮೊದಲು ಪ್ರಯತ್ನಪಡು. ಕೈಗೆ ಎಣ್ಣೆ ಸವರಿಕೊಂಡು ಹಲಸಿನ ಹಣ್ಣು ಬಿಡಿಸು. ಆಗ ಅದರ ಅಂಟು ಅಂಟಿಕೊಳ್ಳುವುದಿಲ್ಲ.

❁ ಯಾರು ವಿವೇಕವನ್ನು ಗಳಿಸಿಕೊಂಡಿದ್ದಾರೊ ಅವರಿಗೆ ಗೊತ್ತಿದೆ, ಭಗವಂತನೊಬ್ಬನೇ ವಸ್ತು ಉಳಿದುದೆಲ್ಲಾ ಅವಸ್ತು ಎಂದು. ವಿವೇಕ ಉದಯವಾಯಿತು ಎಂದರೆ, ಭಗವಂತನನ್ನು ಅರಿಯಬೇಕು ಎಂಬ ಇಚ್ಛೆಯಾಗುತ್ತದೆ.

ಶ್ರೀರಾಮಕೃಷ್ಣ ವಚನವೇದದಿಂದ